ಕ್ರ. ಸಂ	ಉಪ ವಿಭಾಗದ ಹೆಸರು	ಖಾಲಿ ಹುದ್ದೆಗಳ ಸಂಖ್ಯೆ
1	ಉಡುಪಿ	08
2	ಬೈಂದೂರು	05
3	ಕಾರ್ಕಳ	03
	ಒಟ್ಟು	**16**

ಇ) ಖಾಲಿ ಇರುವ ಕಿರಿಯ ಇಂಜಿನಿಯರ್ ಹುದ್ದೆಗಳನ್ನು ತುಂಬುವಂತೆ ನೇಮಕಾತಿ ಪ್ರಾಧಿಕಾರವನ್ನು ಈಗಾಗಲೇ ಕೋರಲಾಗಿದೆ

485(686) ಶ್ರೀ ಗೋಪಾಲಕೃಷ್ಣ ಬೇಳೂರು ಬಿ ಕೆ (ಸಾಗರ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿ ಪ್ರಾಥಮಿಕ ಶಾಲಾ ಮಕ್ಕಳಿಗೆ ಒಬ್ಬ ವಿದ್ಯಾರ್ಥಿಗೆ ಒಂದು ಜೊತೆ ಸಮವಸ್ತ್ರ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಮಲೆನಾಡಿನ ಪ್ರದೇಶದಲ್ಲಿ ಮಳೆಗಾಲದಲ್ಲಿ ಬಟ್ಟೆಗಳು ಒಣಗಲು ಹೆಚ್ಚು ದಿನಗಳು ಬೇಕಾಗುವುದರಿಂದ ವಿದ್ಯಾರ್ಥಿಗಳಿಗೆ ಅನಾನುಕೂಲವಾಗುವುದಿಲ್ಲವೇ,

ಇ) ಹಾಗಿದ್ದಲ್ಲಿ, ಮಲೆನಾಡಿನ ಪ್ರದೇಶಗಳಲ್ಲಿ ವರ್ಷಕ್ಕೆ 2 ಜೊತೆ ಸಮವಸ್ತ್ರ ನೀಡಲು ಸರ್ಕಾರ ಕೈಗೊಂಡ ಕ್ರಮವೇನು, (ವಿವರ ನೀಡುವುದು)?

ಶ್ರೀ ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ವಿದ್ಯಾವಿಕಾಸ ಯೋಜನೆಯಡಿಯಲ್ಲಿ ರಾಜ್ಯದ ಸರ್ಕಾರಿ ಶಾಲಾ ಮಕ್ಕಳಿಗೆ ಒಂದು ಜೊತೆ ಉಚಿತ ಸಮವಸ್ತ್ರ ನೀಡಲು ಅವಕಾಶವಿರುತ್ತದೆ

ಆ) ಹೌದು

ಇ) ಈಗಿನ ಆಯವ್ಯಯ ಲಭ್ಯತೆಯೊಳಗೆ ಈ ಸಲಹೆಯಂತೆ ನೀಡಲು ಅವಕಾಶವಿಲ್ಲ